ಅ) ಕಾರ್ಮಿಕರಿಗೆ ಸವಲತ್ತು ಒದಗಿಸಲು ಸರ್ಕಾರ ಎಲ್ಲಾ ಕ್ರಮ ಕೈಗೊಂಡಿದೆ.

ಇ) ಕನಿಷ್ಠ ವೇತನವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಸಲುವಾಗಿ ಕಾರ್ಮಿಕ ಇಲಾಖೆಯ ಕಾರ್ಮಿಕ ನಿರೀಕ್ಷಕರು, ಹಿರಿಯ ಕಾರ್ಮಿಕ ನಿರೀಕ್ಷಕರು, ಸಹಾಯಕ ಕಾರ್ಮಿಕ ಆಯುಕ್ತರು, ಉಪ ಕಾರ್ಮಿಕ ಆಯುಕ್ತರು, ಜಂಟಿ ಕಾರ್ಮಿಕ ಆಯುಕ್ತರು ಅಪರ ಕಾರ್ಮಿಕ ಆಯುಕ್ತರು, ಮತ್ತು ಕಾರ್ಮಿಕ ಆಯುಕ್ತರನ್ನು ಕನಿಷ್ಠ ವೇತನ ಕಾಯ್ದೆಯಡಿಯಲ್ಲಿ ನಿರೀಕ್ಷಕರನ್ನಾಗಿ ನೇಮಿಸಲಾಗಿದೆ. ಅಲ್ಲದೆ ನಿಗಧಿ ಪಡಿಸಿದ ಕನಿಷ್ಠ ವೇತನ, ಕಡಿಮೆ ಕನಿಷ್ಠ ವೇತನವನ್ನು ಮಾಲೀಕರು ತಮ್ಮ ಕಾರ್ಮಿಕರಿಗೆ ನೀಡುತ್ತಿದ್ದಲ್ಲಿ, ಅಂತಹ ಪ್ರಕರಣಗಳನ್ನು ಕಾರ್ಮಿಕ ನಿರೀಕ್ಷಕರು, ಕಾರ್ಮಿಕರು, ಕಾರ್ಮಿಕ ಸಂಘಗಳು ಸಲ್ಲಿಸುವ ಕ್ಲೈಮ್ ಅರ್ಜಿಗಳಿಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಿ, ತೀರ್ಮಾನ ಕೈಗೊಂಡು ವ್ಯತ್ಯಾಸ ಕನಿಷ್ಠ ವೇತನ, ತುಟ್ಟಿಭತ್ಯೆಯನ್ನು ಪಾವತಿ ಮಾಡುವ ಸಲುವಾಗಿ ಕಾಯ್ದೆಯ ಸೆಕ್ಷನ್ 20ರ ಅಡಿಯಲ್ಲಿ ಕಾರ್ಮಿಕ ಅಧಿಕಾರಿಯವರನ್ನು 'ಕ್ಲೈಮ್ಸ್ ಪ್ರಾಧಿಕಾರಿ'ಗಳನ್ನಾಗಿ ನೇಮಕ ಮಾಡಲಾಗಿದೆ.

ಈ) ಅಗತ್ಯ ಸಿಬ್ಬಂದಿ ಇದೆ. ಮೈಸೂರು ತಾಲ್ಲೂಕಿನ ಕಾರ್ಯವ್ಯಾಪ್ತಿಯಲ್ಲಿ ಸಹಾಯಕ ಕಾರ್ಮಿಕ ಆಯುಕ್ತರು, ಕಾರ್ಮಿಕ ಅಧಿಕಾರಿ ಹಾಗೂ 4 ಜನ ಹಿರಿಯ ಕಾರ್ಮಿಕ ನಿರೀಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

## ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಹಣೆ

3115 - ಶ್ರೀ ಗುರುಸ್ವಾಮಿ ಎ.ಎಸ್ (ಚಾಮುಂಡೇಶ್ವರಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ಸರ್ಕಾರದ ನೀತಿಯ ಪ್ರಕಾರ ರಸ್ತೆ ಮತ್ತು ಸೇತುವೆ ಕಾರ್ಪೊರೇಷನ್ ರಚನೆಯಾದ ನಂತರ ಲೋಕೋಪಯೋಗಿ ಇಲಾಖೆಯ ಮೇಲಿನ ಒತ್ತಡ ಕಡಿಮೆಯಾಗಿ ನೌಕರರಿಗೆ ಕೆಲಸ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?*

ಆ) *ನೌಕರರಿಗೆ ವೇತನಕ್ಕೆ ಸರಿಸಮಾನವಾದ ಕೆಲಸ ನೀಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ? ಖಾಸಗಿ ಸಂಸ್ಥೆಗಳಲ್ಲಿ ಇರುವಂತೆ ಲೋಕೋಪಯೋಗಿ ಇಲಾಖೆಯಲ್ಲಿ ನೌಕರರ ಗಾತ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? ಈ ನೌಕರರು ಕಾರ್ಯದ ಗುಣಮಟ್ಟ ಹೆಚ್ಚಿಸಲು ಏನು ಕ್ರಮ ಕೈಗೊಳ್ಳಲಾಗಿದೆ ? ಕಳೆದ 2 ವರ್ಷದ ವಿವರ ನೀಡುವುದು ?*

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಕರ್ನಾಟಕ ರಸ್ತೆ ನಿರ್ಮಾಣ ನಿಗಮವು ಮುಖ್ಯವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ ಕೆಲವು ನಿರ್ದಿಷ್ಟ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕಾರ್ಯನಿರ್ವಹಿಸುವ ಹೊಣೆಗಾರಿಕೆ ಹೊತ್ತಿರುತ್ತವೆ. ಆದಕಾರಣ ನಿಗಮವು ಕಾರ್ಯಾರಂಭಿಸಿದ ಮಾತ್ರಕ್ಕೆ ಲೋಕೋಪಯೋಗಿ

ಇಲಾಖೆಯ ಕೆಲಸದ ಹೊರೆ ಕಡಿಮೆಯಾಗಿರುವುದಿಲ್ಲ ಮತ್ತು ಲೋಕೋಪಯೋಗಿ ಇಲಾಖೆಯ ನೌಕರರ ಮೇಲಿನ ಕೆಲಸದ ಒತ್ತಡವು ಸಹ ಕಡಿಮೆಯಾಗಿ ಇರುವುದಿಲ್ಲ.

ಅ) ನೌಕರರಿಗೆ ವಹಿಸಿರುವ ಸಮಾನ ಕೆಲಸಕ್ಕೆ ವೇತನವನ್ನು ಈಗಾಗಲೇ ನೀಡಲಾಗುತ್ತಿದೆ. ಸರ್ಕಾರಿ ನೌಕರರ ಗಾತ್ರಕ್ಕೂ, ಖಾಸಗಿ ಸಂಸ್ಥೆಗಳ ನೌಕರರ ಗಾತ್ರಕ್ಕೂ ಹೊಲಿಕೆ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಸಾಮಾನ್ಯವಾಗಿ ಖಾಸಗಿ ಸಂಸ್ಥೆಗಳು ಲಾಭಾದಾಯಕವಾಗಿ ಕಾರ್ಯನಿರ್ವಹಿಸುವಲ್ಲಿ ಹೆಚ್ಚಿನ ಚಿಂತನೆ ಮಾಡುತ್ತದೆ. ಆದರೆ ಸರ್ಕಾರವು ಸಾರ್ವಜನಿಕ ಹಿತದೃಷ್ಟಿಯಿಂದ ಕಾರ್ಯನಿರ್ವಹಿಸುವ ಗುರುತರ ಹೊಣೆ ಹೊತ್ತಿರುವುದರಿಂದ ಈ ವೈಪರೀತ್ಯ ಉದ್ಭವಿಸುತ್ತದೆ. ಇಲಾಖಾ ನೌಕರರ ಕಾರ್ಯದ ಗುಣಮಟ್ಟ, ಹೆಚ್ಚಿಸಲು ತರಬೇತಿ ಹೆಚ್ಚಿನ ವ್ಯಾಸಂಗ ಹಾಗೂ ಕಮ್ಮಟಗಳಿಗೆ ನಿಯೋಜಿಸಲಾಗುತ್ತಿದೆ.

## ಮಲೆನಾಡು ಅಭಿವೃದ್ಧಿ ಮಂಡಳಿಗೆ ಬಿಡುಗಡೆಯಾದ ಹಣ

3118 - ಶ್ರೀ ಗೋಪಾಲ ಭಂಡಾರಿ ಹೆಚ್ (ಕಾರ್ಕಳ) : ಮಾನ್ಯ ಮೀನುಗಾರಿಕೆ ಬಂದರು ಹಾಗೂ ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಕಳೆದ ಮೂರು ವರ್ಷಗಳಿಂದ ಮಲೆನಾಡು ಪ್ರದೇಶಾಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ ವಿಧಾನ ಸಭಾಕ್ಷೇತ್ರಗಳಿಗೆ ಕ್ಷೇತ್ರಾವಾರು ಎಷ್ಟು ಹಣ ಒದಗಿಸಲಾಗಿದೆ ಮತ್ತು ಎಷ್ಟು ಬಿಡುಗಡೆ ಮಾಡಲಾಗಿದೆ ಮತ್ತು ಎಷ್ಟು ಖರ್ಚಾಗಿದೆ ಕ್ಷೇತ್ರಾವಾರು ವಿವರ ಒದಗಿಸುವುದು.*

ಶ್ರೀ ಬಿ. ರಮಾನಾಥ ರೈ (ಮೀನುಗಾರಿಕೆ, ಬಂದರು ಹಾಗೂ ಪ್ರದೇಶಾಭಿವೃದ್ಧಿ ಸಚಿವರು) :

ಅ) ಕ್ಷೇತ್ರಾವಾರು ಹಣ ಬಿಡುಗಡೆ ಮಾಡಲಾಗುವುದಿಲ್ಲ. ಅನುಷ್ಠಾನಧಿಕಾರಿಗಳಿಗೆ ಹಣ ಬಿಡುಗಡೆ ಮಾಡಲಾಗುವುದು. ಜಿಲ್ಲಾವಾರು ಒದಗಿಸಿದ, ಬಿಡುಗಡೆಯಾದ ಹಾಗೂ ಖರ್ಚಾದ ಮೊತ್ತವನ್ನು ಅನುಬಂಧದಲ್ಲಿ ನೀಡಲಾಗಿದೆ.

table 2 page